# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಸಕಾಅ/ಕೊಉವಿ/ಪಿಆರ್/03/2022-23

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 20.06.2022

**ದಿನಾಂಕ: 20.06.2022 ರಂದು ವಾರ್ಡ್ ಸಂಖ್ಯೆ 08 ರಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಶ್ರೀನಿವಾಸ ಮೂರ್ತಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ. ಡಾ॥ ರವಿ, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ.
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) **(BWSSB)**
- ಶ್ರೀ ವಿ. ಮಂಜುನಾಥ್,ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಎಂ.ಎನ್. ಮುನಿರಾಜು, ಕಿರಿಯ ಅಭಿಯಂತರರು, ಬೆಸ್ಕಾಂ
- ಶ್ರೀ ಜಿ. ವಿಶ್ವನಾಥ್, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಗೋವಿಂದರಾಜು.ಇ, ಸಹಾಯಕ ಅಭಿಯಂತರರು, ಬೆಸ್ಕಾಂ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಸುದರ್ಶನ್ ರೆಡ್ಡಿ, ಸಹಕಾರನಗರ ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಕಾರ್ಯದರ್ಶಿ, ವಸತಿ ಕ್ಷೇಮಾಭಿವೃದ್ಧಿ ಸಂಘ
- ಶ್ರೀ ಅಂಜಿನಪ್ಪ, ಬಿಬಿ ನಗರ ಸದಸ್ಯರು
- ಶ್ರೀ ನವೀನ್ ಎಸ್, ಸಹಕಾರನಗರ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ಎ.ಆರ್.ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ. ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು. ನಂತರ ಹಾಜರಿದ್ದ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು ಮಾತನಾಡಿ, ಸದರಿ ಬಡಾವಣೆಯಲ್ಲಿ ಹಾಪ್‌ಕಾಮ್ಸ್ ಅಂಗಡಿಯವರು ತಮ್ಮ ಸಾಮಗ್ರಿಗಳನ್ನು ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿ ವ್ಯಾಪಾರ ನಡೆಸುತ್ತಿದ್ದಾರೆ, ಇದರಿಂದ ಸಾರ್ವಜನಿಕರಿಗೆ ರಸ್ತೆಯಲ್ಲಿ ಓಡಾಡಲು ಬಹಳ ತೊಂದರೆಯಾಗುತ್ತಿದೆ ಎಂದು ಫುಟ್‌ಪಾತ್ ಮೇಲೆ ವ್ಯಾಪಾರ ಸಾಮಗ್ರಿಗಳನ್ನು ಇಡುದಂತೆ ತಡೆಯಲು ಸಭೆಗೆ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ಅಂಗಡಿಗೆ ನೋಟಿಸ್ ನೀಡಿ ವ್ಯಾಪಾರದ ಸಾಮಗ್ರಿಗಳನ್ನು ಪಾದಚಾರಿ ಮಾರ್ಗದಲ್ಲಿ ಇಡದಿರುವಂತೆ ತಡೆಯಲು ಸೂಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಹಾಗೂ 6ನೇ ಮುಖ್ಯ ರಸ್ತೆಯ 9ನೇ ಅಡ್ಡ ರಸ್ತೆಯಲ್ಲಿ ಸಾರ್ವಜನಿಕರು ರಸ್ತೆಯಲ್ಲಿ ಕಸವನ್ನು ಹಾಕುತ್ತಿರುವುದು ಕಂಡುಬಂದಿರುತ್ತದೆ. ಸದರಿ ಬಡಾವಣೆಯಲ್ಲಿ ಅಳವಡಿಸಿರುವ ವಿದ್ಯುತ್ ದೀಪಗಳು ಸರಿಯಾಗಿ ಕೆಲಸ ಮಾಡುತ್ತಿಲ್ಲ. ಇದರಿಂದ ಸಾರ್ವಜನಿಕರಲ್ಲಿ ಕಳ್ಳತನವಾಗುವ ಭಯವಿದೆ, ಸರಿಪಡಿಸಿಕೊಡುವಂತೆ ಎಂದು ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್‌ರವರಿಗೆ ಸೂಚಿಸಿದರು. ಸದರಿ ಬಡಾವಣೆಯಲ್ಲಿ ಇರುವ ಬ್ಲಾಕ್ ಸ್ಪಾಟ್‌ಗಳನ್ನು ಸ್ವಚ್ಛ ಪಡಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು ಹಾಗೂ ವಿದ್ಯುತ್ ವಿಭಾಗದ ಅಭಿಯಂತರರನ್ನು ಸಂಪರ್ಕಿಸಿ ಸದರಿ ಬಡಾವಣೆಯಲ್ಲಿ ಅಳವಡಿಸಿರುವ ವಿದ್ಯುತ್ ದೀಪಗಳನ್ನು ಸರಿಪಡಿಸಿಕೊಡುವಂತೆ ಸೂಚಿಸಿದರು.

ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ ಕಾರ್ಯದರ್ಶಿ ರವರು ಮಾತನಾಡಿ ಸದರಿ ಬಡಾವಣೆಯಲ್ಲಿ ರಸ್ತೆಬದಿ ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುತ್ತಿಲ್ಲವೆಂದು ಸಭೆಗೆ ತಿಳಿಸಿ, ಸದರಿ ಸಮಸ್ಯೆಯನ್ನು ಬಗೆಹರಿಸಲು 2 ಕಲ್ವಟ್‌ಗಳ ಅವಶ್ಯಕತೆ ಇರುತ್ತದೆ ಎಂದು ಸಭೆಗೆ ತಿಳಿಸಿದರು. ಅದೆ ರೀತಿ ಶ್ರೀ ಅಂಜಿನಪ್ಪ ಹಾಗೂ ಶ್ರೀ ವೆಂಕಟಸ್ವಾಮಿ ರವರು ಡಿ-ಇನ್‌ಕ್ಲೇವ್ ಹಾಗೂ ದೇವಿನಗರದಲ್ಲಿ ಕಲ್ವರ್ಟ್‌ಗಳನ್ನು ನಿರ್ಮಿಸಿಕೊಡಲು ಸಭೆಗೆ ಕೋರಿದರು.

ಈ ಕುರಿತು ಶ್ರೀ ಗುರು, ನೋಡೆಲ್ ಅಧಿಕಾರಿಗಳು ಮಾತನಾಡಿ, ಸದರಿ ಬಡಾವಣೆಯ ಸಮಸ್ಯೆಯನ್ನು ಶ್ರೀ ಪ್ರವೀಣ್‌ಎ.ಆರ್., ಕಿರಿಯ ಅಭಿಯಂತರರವರಿಗೆ ಸೂಕ್ತಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆ ರಸ್ತೆಯಲ್ಲಿರುವ ಅಂಗಡಿಗಳ ಎದುರು ವಾಹನಗಳನ್ನು ನಿಲ್ಲಿಸುತ್ತಿರುತ್ತಾರೆ. ಅದರಿಂದ ಸಾರ್ವಜನಿಕರಿಗೆ ಓಡಾಡಲು ತುಂಬಾ ಕಷ್ಟಕರವಾಗಿರುತ್ತದೆ ಅದನ್ನು ಸಹ ಸರಿಪಡಿಸಿ ಕೊಡಲುಕೋರಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಹಾಗೂ ಶ್ರೀ ಪ್ರವೀಣ್ ಎ. ಆರ್, ಕಿರಿಯ ಅಭಿಯಂತರರಿಗೆ ಜಂಟಿ ಸ್ಥಳ ಪರಿಶೀಲನೆ ಮಾಡಿ ವರದಿಯನ್ನು ನೀಡಲು ಹಾಗೂ ಹಿರಿಯ ಆರೋಗ್ಯ ನಿರಿಕ್ಷಕರಿಗೆ ಸಂಬಂಧಿಸಿದ ಅಂಗಡಿಗಳಿಗೆ ನೋಟಿಸನ್ನು ಜಾರಿ ಮಾಡಲು ಹಾಗೂ ಮುಂದಿನ ಸಭೆಗೆ ಮುನ್ನವೆ ಸದರಿ ಸಮಸ್ಯೆ ಬಗೆಹರಿಸಲು ತಿಳಿಸಿದರು.

ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ ರವರು ಮಾತನಾಡಿ Dry Waste Collection Center (DWCC) ಸ್ಥಾಪಿಸಲು 40*60 ಅಡಿಗಳ ಜಾಗ ಬೇಕಾಗಿರುತ್ತದೆ, ಜಾಗವನ್ನು ಗುರುತಿಸಿಕೊಡುವಂತೆ ಸಭೆಗೆ ಮನವಿ ಮಾಡಿದರು.

ಟಾಟಾನಗರದಲ್ಲಿ ಈಗಾಗಲೇ ಬಿಬಿಎಂಪಿಯಿಂದ ನಿರ್ಮಿಸಿರುವ ಶೆಡ್ ಇದ್ದು, ಈ ಜಾಗವನ್ನು Dry Waste Collection Center (DWCC) ವನ್ನಾಗಿ ಉಪಯೋಗಿಸಲು ಸರ್ವಾನುಮತದಿಂದ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಕೊಡಿಗೇಹಳ್ಳಿ ವೃತ್ತದಲ್ಲಿ ಆರೋಗ್ಯ ಕೇಂದ್ರವಾಗಿ ಬಳಸಲಾಗುತ್ತಿದ್ದ ಕಟ್ಟಡವು ತುಂಬ ವರ್ಷಗಳ ಹಿಂದೆ ನಿರ್ಮಾಣವಾಗಿದ್ದು, ಚಿಕ್ಕ ಜಾಗವಾಗಿದ್ದ ಕಾರಣ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸರ್ಕಾರಿ ಶಾಲೆ ರಸ್ತೆಯಲ್ಲಿ ನಿರ್ಮಾಣ ಮಾಡಿ ಸುಮಾರು 3 ವರ್ಷಗಳಿಂದ ನಡೆಸಲಾಗುತ್ತಿರುತ್ತದೆ. ಹಳೆಯ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವು ಸುಮಾರು 3 ವರ್ಷಗಳಿಂದ ಯಾವುದೇ ಬಳಕೆ ಮಾಡದೆ ಇದ್ದು, ಇದು ಶಿಥಿಲಾವಸ್ಥೆಯಿಂದ ಇರುವುದು. ಈ ಕಟ್ಟಡವು ಮಳೆಗಾಲದಲ್ಲಿ ಕುಸಿಯುವ ಸಂದರ್ಭ ಹೆಚ್ಚಾಗಿರುತ್ತದೆ. ಆದಕಾರಣ ಬಿಬಿಎಂಪಿರವರು ಈಗಾಗಲೇ ಶಿಥಿಲಾವಸ್ಥೆಯ ಬಿಬಿಎಂಪಿ ಪಟ್ಟಿಯಲ್ಲಿ ಸೇರಿಸಿಕೊಂಡು ಅತೀ ಶೀಘ್ರದಲ್ಲಿ ಕಟ್ಟಡವನ್ನು ನೆಲಸಮಗೊಳಿಸಿ, ಯಾವುದೇ ರೀತಿ ಅಹಿತಕರ ಘಟನೆ ಸಂಭವಿಸದಂತೆ ಕ್ರಮವಹಿಸಬೇಕೆಂದು ವಾರ್ಡ್ ಸಮಿತಿ ಸರ್ವಾನುಮತದಿಂದ ತೀರ್ಮಾನಿಸಲಾಗಿದೆ.

ಭದ್ರಪ್ಪ ಬಡಾವಣೆ ಮುಖ್ಯ ರಸ್ತೆಯ ಸರ್ವೆ ಸಂಖ್ಯೆ: 56/1 ರಲ್ಲಿ ಸರ್ಕಾರದ ಜಾಗಕ್ಕೆ ತಂತಿಬೇಲಿ ಹಾಕಿ ಇಲ್ಲಿಯವರೆಗೆ ರಕ್ಷಣೆ ಮಾಡಿರುವುದು ಕಂಡುಬಂದಿರುತ್ತದೆ. ಈ ಜಾಗವನ್ನು ಸರ್ಕಾರದ ಯಾವುದೇ ಯೋಜನೆಗಳಲ್ಲಿ ಬಳಸಿಕೊಳ್ಳಬೇಕೆಂದು ಸಮಿತಿಯಿಂದ ತೀರ್ಮಾನಿಸಲಾಗಿದೆ.

ಡಾ॥ ರವಿ, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ ರವರು ಮಾತನಾಡಿ ಕಸವನ್ನು ರಸ್ತೆಯಲ್ಲಿ ಹಾಕುವುದರಿಂದ ಸೊಳ್ಳೆಗಳ ಪ್ರಮಾಣ ಹೆಚ್ಚಾಗುತ್ತದೆ ಎಂದು, ಇದರಿಂದ ಸಾಕಷ್ಟು ಆರೋಗ್ಯ ಸಮಸ್ಯೆಗಳು ಉಂಟಾಗುತ್ತದೆ ಎಂದು ಸಭೆಯಲ್ಲಿದ ಸದಸ್ಯರು ಹಾಗೂ ಅಧಿಕಾರಿಗಳಿಗೆ ಬ್ಲಾಕ್ ಸ್ಪಾಟ್‌ಗಳು ಬಡಾವಣೆಯಲ್ಲಿ ಇರದಂತೆ ನೋಡಿಕೊಳ್ಳಲು ಸಂದೇಶ ನೀಡಿದರು.

ಅಂತಿಮವಾಗಿ ಶ್ರೀ ಗುರು, ನೋಡೆಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು. ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

20/6/22

| | |
|---|---|
| ಕಾರ್ಯದರ್ಶಿಗಳು ಮತ್ತು<br>ಕಿರಿಯ ಅಭಿಯಂತರರು<br>ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ | ನೋಡಲ್ ಅಧಿಕಾರಿ ಹಾಗೂ<br>ವಾರ್ಡ್ ಸಮಿತಿ ಅಧ್ಯಕ್ಷರು<br>ವಾರ್ಡ್ ಸಂಖ್ಯೆ:08 |